**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.2200/2022**

ಪಿ.ಡಬ್ಲ್ಯೂ: 5

ಸಿ.ಡಬ್ಲ್ಯೂ: 12

ಸಾಕ್ಷಿದಾರರ ಹೆಸರು : ಕೆ ಮಂಜು

ತಂದೆಯ ಹೆಸರು: :ಕುಪ್ಪುಸ್ವಾಮಿ

ವಯಸ್ಸು : **45 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಇಂದಿರಾ ನಗರ ರಂಗೇನಹಳ್ಳಿ

**ದಿನಾಂಕ: 10-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 3-4 ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ಹೀರೋ ಸ್ಪಂಡರ್ ಬೈಕನ್ನು ಬಿಡಿಸಿಕೊಳ್ಳುವ ಬಗ್ಗೆ ಒಂದು ದಾಖಲಾತಿಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ವಾಹನ ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-9 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-9(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-10 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **20-05-2020** ರಂದು ಬೆಳಿಗ್ಗೆ **10-00** ರಿಂದ **10-45** ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ಕೆಎ **14** ಇ ಯು **3503** ಹಿರೋ ಸ್ಪೆಂಡರ್ ಪ್ಲಸ್ ಬೈಕು ಅಪಘಾತಪಡಿಸಿರುವ ವಿಚಾರವಾಗಿ ಪೊಲೀಸರು ಅಮಾನತ್ತು ಮಹಜರ್ ಮಾಡಿದ್ದು, ಸದರಿ ಬೈಕ್ ನ್ನು ನಿಮ್ಮ ಸಮಕ್ಷಮ ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ಬೈಕನ್ನು ಬಿಡಿಸಿಕೊಳ್ಳಲು ಸಹಿ ಮಾಡಿರುತ್ತೇನೆಂದು ನುಡಿದಿರುತ್ತಾರೆ.

**<u>ಪಾಟೀ ಸವಾಲು ಃ ಆರೋಪಿ ಪರ  ವಕೀಲರಿಂದ.</u>**

ಅಮಾನತ್ತು ಮಹಜರ್ ನ್ನು ಪೊಲೀಸರು ಓದಿ ತಿಳಿಸಿರುವುದಿಲ್ಲ. ಅಪಘಾತವಾದ ಸ್ಥಳದಲ್ಲಿ ನಾನು ಇರಲಿಲ್ಲ. ಬೈಕನ್ನು ಬಿಡಿಸುವ ವಿಚಾರವಾಗಿ ಸಹಿ ಮಾಡಿರುತ್ತೇನೆ ನನಗೆ ಯಾವುದೇ ವಿಚಾರ ತಿಳಿದಿರುವುದಿಲ್ಲ.

**<u>ಮರುವಿಚಾರಣೆ</u>ಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**